ಕರ್ನಾಟಕ ವಿಧಾನಸಭೆ

ಹದಿಮೂರನೇ ವಿಧಾನಸಭೆ

(ಹನ್ನೆರಡನೇ ಅಧಿವೇಶನ)

ಕಾರ್ಯಕಲಾಪಗಳ ಪಟ್ಟಿ

ಮಂಗಳವಾರ, ದಿನಾಂಕ 7ನೇ ಫೆಬ್ರವರಿ, 2012

(ಸಮಯ: ಬೆಳಿಗ್ಗೆ 11.00 ಗಂಟೆಗೆ)

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು	:	ಆರನೇ ಪಟ್ಟಿ
ಆ) ದಿನಾಂಕ 06.02.2012ರ ಐದನೇ ಪಟ್ಟಿಯಿಂದ ತಡೆಹಿಡಿಯಲಾದ ಶ್ರೀ ಕಿಮ್ಮನೆ ರತ್ನಾಕರ ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ 62(257)	:	ಮುಖ್ಯಮಂತ್ರಿಯವರು
ಇ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು	:	ಆರನೇ ಪಟ್ಟಿ

2. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

ಶ್ರೀಯುತರಾದ ಸಿದ್ದರಾಮಯ್ಯ, ಟಿ.ಬಿ. ಜಯಚಂದ್ರ, ವಿ.ಶ್ರೀನಿವಾಸಪ್ರಸಾದ್, ಡಾ: ಹೆಚ್.ಸಿ. ಮಹಾದೇವಪ್ಪ, ರಾಜಶೇಖರ ಪಾಟೀಲ್ ಹಾಗೂ ಇತರರು ರಾಜ್ಯದಲ್ಲಿ ಅಕ್ರಮ ಗಣಿಗಾರಿಕೆ ಮತ್ತು ಅಕ್ರಮವಾಗಿ ಕಬ್ಬಿಣದ ಅದಿರನ್ನು ರಫ್ತು ಮಾಡಿರುವ ಬಗ್ಗೆ ಲೋಕಾಯುಕ್ತವು ಸರ್ಕಾರಕ್ಕೆ ಅಂತಿಮ ವರದಿಯನ್ನು ಸಲ್ಲಿಸಿದ್ದು ಸದರಿ ಗಣಿಗಾರಿಕೆಯಲ್ಲಿ ರಾಜಕಾರಣಿಗಳು ಹಾಗೂ ಅಧಿಕಾರಿಗಳು ಶಾಮೀಲಾಗಿದ್ದು ಸಾವಿರಾರು ಕೋಟಿ ರೂಪಾಯಿ ಸರ್ಕಾರದ ಬೊಕ್ಕಸಕ್ಕೆ ನಷ್ಟವಾಗಿರುವುದಾಗಿ ವರದಿಯಲ್ಲಿ ತಿಳಿಸಿದ್ದು, ಸದರಿ ವರದಿಯಲ್ಲಿನ ಶಿಫಾರಸ್ಸುಗಳನ್ನು ಅನುಷ್ಠಾನಗೊಳಿಸುವ ವಿಚಾರದಲ್ಲಿ ನೀಡಿರುವ ಸೂಚನೆಯ ಬಗ್ಗೆ ನಡೆದ ಚರ್ಚೆಗೆ ಸರ್ಕಾರದ ಉತ್ತರ.

3. ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವ

"2012ರ ಜನವರಿ 30ರಂದು ವಿಧಾನಮಂಡಲದ ಉಭಯ ಸದನಗಳ ಸದಸ್ಯರನ್ನುದ್ದೇಶಿಸಿ ದಯಪಾಲಿಸಿದ ಭಾಷಣಕ್ಕಾಗಿ ಈ ಅಧಿವೇಶನದಲ್ಲಿ ಸೇರಿರುವ ವಿಧಾನಸಭೆಯ ಸದಸ್ಯರಾದ ನಾವು ಘನತೆವೆತ್ತ ರಾಜ್ಯಪಾಲರಿಗೆ ಕೃತಜ್ಞತಾಪೂರ್ವಕವಾದ ವಂದನೆಗಳನ್ನು ಸಮರ್ಪಿಸಲು ಅಪ್ಪಣೆ ಕೋರುತ್ತೇವೆ"ಎಂದು ಮಾನ್ಯ ಸದಸ್ಯರಾದ ಶ್ರೀ ಡಿ.ಎನ್. ಜೀವರಾಜ್ ಅವರು ದಿನಾಂಕ 2012ರ ಫೆಬ್ರವರಿ 3ರಂದು ಸೂಚಿಸಿದ ಪ್ರಸ್ತಾವದ ಮೇಲೆ ಮುಂದುವರಿದ ಚರ್ಚೆ.

ಮು.ತಿ.ನೋ.

4. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

ಶ್ರೀಯುತರಾದ ಹೆಚ್.ಡಿ. ರೇವಣ್ಣ, ಸಿ.ಎಸ್. ಪುಟ್ಟೇಗೌಡ, ಎಂ.ಟಿ. ಕೃಷ್ಣಪ್ಪ, ವೆಂಕಟರಾವ್ ನಾಡಗೌಡ ಮತ್ತು ಸುನೀಲ ವಿ ಹೆಗ್ಗಡೆ ಹಾಗೂ ಇತರರು ರಾಜ್ಯ ಸರ್ಕಾರ ಈಗಾಗಲೇ ನೂರು ತಾಲ್ಲೂಕುಗಳನ್ನು ಬರಗಾಲ ಪ್ರದೇಶವೆಂದು ಘೋಷಿಸಿರುವುದು ಹಾಗೂ ಬರಗಾಲ ಪ್ರದೇಶದಲ್ಲಿ ರೈತರು ಬೆಳೆದ ಬೆಳೆಗಳು ನಾಶವಾಗಿದ್ದು ಹಾಗೂ ರೈತರು ಬೆಳೆದ ಬೆಳೆಗಳ ಬೆಲೆಗಳು ಕುಸಿದಿರುವುದರಿಂದ ರೈತರು ಭಾರಿ ನಷ್ಟವನ್ನು ಅನುಭವಿಸುತ್ತಿದ್ದು, ಇದರಿಂದಾಗಿ ರೈತರು ಆತ್ಮಹತ್ಯೆಗೆ ಶರಣಾಗುತ್ತಿರುವುದರಿಂದ ಉಂಟಾಗಿರುವ ವಿಚಾರದಲ್ಲಿ ನೀಡಿರುವ ಸೂಚನೆಯ ಬಗ್ಗೆ ಚರ್ಚೆ

5. ಗಮನ ಸೆಳೆಯುವ ಸೂಚನೆಗಳು

1. ಶ್ರೀಯುತರಾದ ಸಿದ್ಧರಾಮಯ್ಯ, ಟಿ.ಬಿ. ಜಯಚಂದ್ರ, ಕಿಮ್ಮನೆ ರತ್ನಾಕರ್ ಹಾಗೂ ಇತರರು ಬಿಜಾಪುರ ಜಿಲ್ಲೆಯ ಸಿಂದಗಿಯಲ್ಲಿ ಪಾಕಿಸ್ತಾನ ಧ್ವಜವನ್ನು ಹಾರಿಸಿ, ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕರಾವಳಿ ತೀರ ಪ್ರದೇಶಗಳಲ್ಲಿ ಸೇರಿದಂತೆ ರಾಜ್ಯದ ಹಲವು ಭಾಗಗಳಲ್ಲಿ ಕೆಲವು ಪಟ್ಟಭದ್ರ ಹಿತಾಸಕ್ತಿಗಳು ಅಲ್ಪಸಂಖ್ಯಾತರನ್ನೇ ಗುರಿಯಾಗಿಟ್ಟುಕೊಂಡು ವಿನಾಕಾರಣ ಪ್ರಚೋದನಕಾರಿ ಭಾಷಣಗಳನ್ನು ಮಾಡಿ ಅಲ್ಪಸಂಖ್ಯಾತ ಜನಾಂಗದವರ ಮೇಲೆ ದಾಳಿ ನಡೆಸಿ ಅವರ ಮನಸ್ಸಿನಲ್ಲಿ ಭಯದ ವಾತಾವರಣ ನಿರ್ಮಾಣ ಮಾಡಿ ಸಮಾಜದಲ್ಲಿ ಅಶಾಂತಿಯನ್ನು ಉಂಟು ಮಾಡುವುದರ ಜೊತೆಗೆ ಕಾನೂನು ಸುವ್ಯವಸ್ಥೆಗೆ ಭಂಗವಾಗುವ ರೀತಿಯಲ್ಲಿ ವರ್ತಿಸುತ್ತಿರುವುದರ ಬಗ್ಗೆ ಗೃಹ ಮತ್ತು ಸಾರಿಗೆ ಸಚಿವರ ಗಮನ ಸೆಳೆಯುವುದು.

2. ಶ್ರೀ ಎನ್. ಸಂಪಂಗಿ ಅವರು ಬೆಂಗಳೂರು ಅಂತರರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಶಾಸಕರುಗಳು ನಿಲ್ದಾಣದ ಒಳಗಡೆ ಪ್ರವೇಶಿಸಲು ಅವಕಾಶಗಳನ್ನು ನೀಡದೆ, ಸಿಬ್ಬಂದಿಗಳು ಅಗೌರವದಿಂದ ನಡೆದುಕೊಳ್ಳುತ್ತಿದ್ದಾರೆ ಮತ್ತು ನಿಲ್ದಾಣಗಳಲ್ಲಿ ಶಾಸಕರನ್ನು ಒಳಗೆ/ಹೊರಗೆ ಕರೆದುಕೊಂಡು ಹೋಗಲು ಡಿ.ಪಿ.ಎ.ಆರ್. (ಶಿಷ್ಟಾಚಾರ) ಸಿಬ್ಬಂದಿಗಳು ಶಾಸಕರುಗಳನ್ನು ಗುರ್ತಿಸುವುದಾಗಲಿ ಅಥವಾ ಅವರಿಗೆ ಗೌರವವನ್ನು ನೀಡದೇ ಇರುವ ಬಗ್ಗೆ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

3. ಶ್ರೀಯುತರಾದ ಹೆಚ್.ಡಿ. ರೇವಣ್ಣ, ಬಂಡೆಪ್ಪ ಕಾಶೆಂಪುರ ಎಂ.ಟಿ. ಕೃಷ್ಣಪ್ಪ ಹಾಗೂ ಇತರರು ರಾಜ್ಯದ ತೋಟಗಾರಿಕಾ ಇಲಾಖೆಯಲ್ಲಿ ದಿನಾಂಕ 01.01.2007ರಿಂದ ಅಧಿಕಾರಿಗಳ ಜೇಷ್ಠತಾ ಪಟ್ಟಿಯನ್ನು ಹೊರಡಿಸದೇ ಕೆ.ಪಿ.ಎಸ್.ಸಿ. ಯಿಂದ ನೇರವಾಗಿ ಆಯ್ಕೆಯಾದ ಅಧಿಕಾರಿಗಳಿಗೆ ಜೇಷ್ಠತೆಯಲ್ಲಿ ಅವಕಾಶ ನೀಡದೇ ಕಿರಿಯ ಅಧಿಕಾರಿಗಳಿಗೆ ಬಡ್ತಿ ನೀಡಲು ಅನುಕೂಲವಾಗುವಂತೆ ಸರ್ಕಾರವು ಹೊರಡಿಸಿರುವ ಆದೇಶದ ಬಗ್ಗೆ ಸಕ್ಕರೆ ಹಾಗೂ ತೋಟಗಾರಿಕೆ ಸಚಿವರ ಗಮನ ಸೆಳೆಯುವುದು.

4. ಡಾ॥ ಶರಣಪ್ರಕಾಶ್ ಪಾಟೀಲ್ ಅವರು 2007ರಲ್ಲಿ ರೈತರ ಹಿತದೃಷ್ಟಿಯಿಂದ ಕರ್ನಾಟಕ ಅಗ್ರಿಕಲ್ಚರ್ ಪ್ರಡ್ಯೂಸ್ ಕಾನೂನಿನ ನಿಯಮ, 73,75,76,78,78A ನಿಯಮಗಳಿಗೆ ಬದಲಾವಣೆ ತಂದಿದ್ದು ದುರದೃಷ್ಟವಶಾತ್ ಇಲ್ಲಿಯವರೆಗೆ ಈ ಕಾನೂನು ಜಾರಿಯಾಗದೇ ಪ್ರತಿವರ್ಷ ರೈತರಿಗೆ ಸಾವಿರಾರು ಕೋಟಿ ನಷ್ಟ ಉಂಟಾಗಿರುವ ಬಗ್ಗೆ ಕೃಷಿ ಸಚಿವರ ಗಮನ ಸೆಳೆಯುವುದು.

ಪು.ತಿ.ನೋ.

5. ಶ್ರೀ ಸುನೀಲ್ ವಿ ಹೆಗಡೆ ಅವರು ಆಶ್ರಯ ಯೋಜನೆ ಫಲಾನುಭವಿಗಳ ಆಯ್ಕೆಯ ಜಾಗೃತ ಸಮಿತಿಗೆ ಸ್ಥಳೀಯ ಶಾಸಕರು ಅಧ್ಯಕ್ಷರಾಗಿದ್ದು, ಈ ಸಮಿತಿಗೆ ಮೇಲ್ಮನೆ ಸದಸ್ಯರನ್ನೂ ಸಹ ಅಧ್ಯಕ್ಷರನ್ನಾಗಿ ನೇಮಿಸಲಾಗುವುದೆಂದು ಹಾಗೂ ಅರ್ಹ ಫಲಾನುಭವಿಗಳನ್ನು ಗುರುತಿಸುವಾಗ ವಿಧಾನಪರಿಷತ್ ಸದಸ್ಯರ ಅಭಿಪ್ರಾಯವನ್ನು ಪಡೆಯುವುದು ಕಡ್ಡಾಯಗೊಳಿಸಿರುವ ಬಗ್ಗೆ ವಸತಿ ಸಚಿವರ ಗಮನ ಸೆಳೆಯುವುದು.

6. ಶ್ರೀ ನೆ.ಲ. ನರೇಂದ್ರಬಾಬು ಅವರು ಮಹಾಲಕ್ಷ್ಮೀ ಬಡಾವಣೆ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ವಾರ್ಡ್ ನಂ 67 (ನಾಗಪುರ)ದಲ್ಲಿರುವ 1ನೇ "ಆರ್" ಬ್ಲಾಕ್‌ನ ಭೀಮಶಕ್ತಿ ಕೊಳಚೆ ಪ್ರದೇಶದ ನಿವಾಸಿಗಳು ಕಳೆದ 30 ವರ್ಷಗಳಿಂದಲೂ ವಾಸವಿದ್ದು, ಈ ಪ್ರದೇಶದ ಜನರಿಗೆ ಕೊಳಚೆ ನಿರ್ಮೂಲನಾ ಮಂಡಳಿ ವತಿಯಿಂದ (ನರ್ಮ್ ಯೋಜನೆ 1ನೇ ಫೇಸ್) ಮನೆ ನಿರ್ಮಾಣ ಮಾಡಿಕೊಡದಿರುವ ಬಗ್ಗೆ ವಸತಿ ಸಚಿವರ ಗಮನ ಸೆಳೆಯುವುದು.

7. ಶ್ರೀ ಕಿಮ್ಮನೆ ರತ್ನಾಕರ್ ಅವರು ಮಲೆನಾಡು ಭಾಗದಲ್ಲಿ ಅಡಿಕೆಗೆ ಹಳದಿ ರೋಗದಿಂದ ಮತ್ತು ಇತರೆ ಕಾರಣಗಳಿಗಾಗಿ ಬೆಳೆ ನಷ್ಟವಾಗಿ ಸಂಪೂರ್ಣ ನಾಶದ ಅಂಚಿನಲ್ಲಿರುವ ಬಗ್ಗೆ ಸಹಕಾರ ಮತ್ತು ಕೃಷಿ ಮಾರುಕಟ್ಟೆ ಸಚಿವರ ಗಮನ ಸೆಳೆಯುವುದು.

8. ಶ್ರೀ ಪ್ರಕಾಶ್ ಬಿ. ಹುಕ್ಕೇರಿ ಅವರು ಬೆಳಗಾವಿ ಜಿಲ್ಲೆ, ಚಿಕ್ಕೋಡಿ ತಾಲ್ಲೂಕ್ ಪಂಚಾಯತ್ ಹಾಲಿ ಕಾರ್ಯ ನಿರ್ವಹಣಾಧಿಕಾರಿಗಳು (ಇಒ) ರಾಜೀವ್‌ಗಾಂಧಿ ಗ್ರಾಮೀಣ ವಸತಿ ನಿಗಮ ನಿಯಮಿತದ ವತಿಯಿಂದ ಅನುಷ್ಠಾನಗೊಳ್ಳತ್ತಿರುವ ಬಸವ ವಸತಿ ಯೋಜನೆಯಡಿ ಆಯ್ಕೆಯಾದ ಫಲಾನುಭವಿಗಳಿಂದ ತಲಾ 500/-ರೂ ಗಳನ್ನು ವಸೂಲಿ ಮಾಡಿಕೊಡಬೇಕೆಂದು (ಪಿ.ಡಿ.ಒ)ಗೆ ಕಿರುಕುಳ ನೀಡುತ್ತಿರುವುದರ ಬಗ್ಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಹಾಗೂ ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಸಚಿವರ ಗಮನ ಸೆಳೆಯುವುದು.

6. ಶಾಸನ ರಚನೆ

ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

1) **ಸಹ್ಯಾದ್ರಿ ಪರಂಪರೆ ಅಭಿವೃದ್ಧಿ ಪ್ರಾಧಿಕಾರ ವಿಧೇಯಕ, 2011**
ಶ್ರೀ ಗೋವಿಂದ ಎಂ. ಕಾರಜೋಳ, (ಸಣ್ಣ ನೀರಾವರಿ, ಕನ್ನಡ ಮತ್ತು ಸಂಸ್ಕೃತಿ ಸಚಿವರು) ಅವರು:-

ಅ) ಸಹ್ಯಾದ್ರಿ ಪರಂಪರೆ ಅಭಿವೃದ್ಧಿ ಪ್ರಾಧಿಕಾರ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

ಪು.ತಿ.ನೋ.

2) ಕರ್ನಾಟಕ ಪೌರಸಭೆಗಳು ಮತ್ತು ಇತರ ಕೆಲವು ಕಾನೂನು (ತಿದ್ದುಪಡಿ) ವಿಧೇಯಕ, 2011
ಶ್ರೀ ಎಸ್. ಸುರೇಶ್ ಕುಮಾರ್, (ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ, ನಗರಾಭಿವೃದ್ಧಿ ಹಾಗೂ ಬೆಂಗಳೂರು ಜಲಮಂಡಳಿ ಸಚಿವರು) ಅವರು:-

ಅ) ಕರ್ನಾಟಕ ಪೌರಸಭೆಗಳು ಮತ್ತು ಇತರ ಕೆಲವು ಕಾನೂನು (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

7. ಅರ್ಧ ಗಂಟೆ ಕಾಲಾವಧಿ ಚರ್ಚೆ

1. ಶ್ರೀ ಕೆ.ಎಂ. ಶಿವಲಿಂಗೇಗೌಡ ಅವರು ಬಿ.ಪಿ.ಎಲ್. ಪಡಿತರಿಗೆ ಸಮರ್ಪಕ ಅಕ್ಕಿ ವಿತರಣೆ ಕೇಂದ್ರ ಸರ್ಕಾರದ ಅನುದಾನ ಬಿಡುಗಡೆ ಬಗ್ಗೆ ದಿನಾಂಕ 02.02.2012 ರಂದು ಸದನದಲ್ಲಿ ಉತ್ತರಿಸುವ ಪ್ರಶ್ನೆಗಳ 3ನೇ ಪಟ್ಟಿಯಲ್ಲಿನ ಪ್ರಶ್ನೆ ಸಂಖ್ಯೆ 35(147)ಕ್ಕೆ ಒದಗಿಸಿರುವ ಉತ್ತರಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

ಪಿ.ಓಂಪ್ರಕಾಶ
ಕಾರ್ಯದರ್ಶಿ

Raj N

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
(www.kar.nic.in/kla)